ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ವಿಭಾಗ
ಜಿ.ಕೆ.ವಿ.ಕೆ., ಬೆಂಗಳೂರು-560065

* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 11.03.2016

ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

ಈ ವಾರದ ಮುನ್ಸೂಚನೆ (ದಿನಾಂಕ 12.03.16–16.03.16 ವರೆಗೆ)

	12.03.16	13.03.16	14.03.16	15.03.16	16.03.16
ಮಳೆ (ಮಿ ಮಿ)	0	0	0	2	1
ಗರಿಷ್ಠ ಉಷ್ಣಾಂಶ(ಡಿ.ಸೆ.)	35	35	35	35	34
ಕನಿಷ್ಠ ಉಷ್ಣಾಂಶ (ಡಿ.ಸೆ.)	20	21	20	20	21
ಮೋಡ (ಪ್ರಮಾಣ)	2	1	2	3	2
ಅರ್ದ್ರತೆ ೭.೨೦ ಬೆ (ಶೇ)	70	65	62	65	70
ಅರ್ದ್ರತೆ ೨.೨೦ ಮ (ಶೇ)	40	50	40	45	50
ಗಾಳಿಯ ವೇಗ (ಕಿ.ಮಿ/ಗಂಟೆಗೆ)	7	8	8	6	4
ಗಾಳಿಯ ದಿಕ್ಕು (ಡಿಗ್ರಿ)	180	220	200	200	220

ಮುಂದಿನ ದಿನಗಳಲ್ಲಿಅಲ್ಲಲ್ಲಿ ಚದುರಿದಂತೆ ತುಂತುರು ಮಳೆಯಾಗುವ ಸಂಭವವಿದೆ. ದಿನದ ಗರಿಷ್ಠ ಉಷ್ಣಾಂಶ **34.0–35.0^0 ಸೆ** ಮತ್ತು ಕನಿಷ್ಠ **20.0–21.0^0 ಸೆ** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **62–70%** ಇದ್ದು ಮಧ್ಯಾಹ್ನ **40–50%** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **4–8** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ತುಂತುರು ಮಳೆಯಾಗುವ ಸಂಭವವಿರುವುದರಿಂದ ಕಡಲೇಕಾಳು ಬೆಳೆ ಕಟಾವು ಮಾಡಿವುದನ್ನು ಕೆಲದಿನಗಳ ಕಾಲ ಮುಂದೂಡಿ. ಕಟಾವು ಮಾಡಿರುವ ಬೆಳೆಗಳನ್ನು ಸಂರಕ್ಷಣೆ ಮಾಡಿ.
- ಕೊಯ್ಲು ಮಾಡಿದ ಕಡಲೇಕಾಳು ಧಾನ್ಯಗಳನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿಸಲು ಕೆಲ ದಿನಗಳ ಕಾಲ ಮುಂದೂಡಿ.

ಮಾವು:

- ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ) ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.
- ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅರ್ಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ.
- **ಜಾನುವಾರು:** ಬಿಸಿಲು ಹೆಚ್ಚಾಗಿರುವುದರಿಂದ ಹಸಿರು ಹುಲ್ಲಿನ ಅಭಾವ ಕಂದುಬರುತ್ತದೆ ಆದುದರಿಂದ ಹಗೇವಿನಲ್ಲಿ ಮೇವನ್ನು ತಯಾರಿಸಿ ದನಕರುಗಳಿಗೆ ಕೊಡಿ.
- ಕೊಟ್ಟಿಗೆಯನ್ನು ಶುಚಿಯಾಗಿ ಇಟ್ಟುಕೊಳ್ಳುವುದು ಮತ್ತು ಜಾನುವಾರುಗಳನ್ನು ಬಿಸಿಲಿನಿಂದ ರಕ್ಷಿಸಬೇಕು.
- ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.
- ಉಷ್ಣಾಂಶವು ಹೆಚ್ಚಾಗುತ್ತಿರುವುದರಿಂದ ದನಕರುಗಳನ್ನು ಬೆಳಿಗ್ಗೆ ಮತ್ತು ಸಂಜೆಯ ಹೊತ್ತಿನಲ್ಲಿ ಮೇಯಿಸಲು ಹೊರಗೆ ಬಿಡಿ.

ನೋಡಲ್ ಅಧಿಕಾರಿ:
ಕೃ.ವಿ.ವಿ, ಜಿ.ಕೆ.ವಿ.ಕೆ
ಬೆಂಗಳೂರು